**ಕರ್ನಾಟಕ ಸರ್ಕಾರದ ನಡವಳಿಗಳು**

**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ**

ವಿಷಯ : ರಾಜ್ಯ ನಾಗರಿಕ ಸೇವಾ ಹುದ್ದೆಗಳ ನೇಮಕಾತಿ ಪದ್ಧತಿಯನ್ನು ನಿರ್ಧರಿಸುವ ಹಾಗೂ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿ ಸೌಲಭ್ಯ ಕಲ್ಪಿಸುವ ಬಗ್ಗೆ ಪರಿಶೀಲಿಸಲು ನಿವೃತ್ತ ಕಾರ್ಯದರ್ಶಿಯವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸುವ ಬಗ್ಗೆ

*****

ಪ್ರಸ್ತಾವನೆ :

ನ್ಯಾಷನಲ್ ಫೆಡರೇಷನ್ ಆಫ್ ದಿ ಬ್ಲೈಂಡ್ ಸಂಸ್ಥೆಯು ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995ರಡಿ ರಾಜ್ಯ ನಾಗರಿಕ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ಕೇಂದ್ರ ಸರ್ಕಾರ ಮತ್ತು ಇತರ ಕೆಲವು ರಾಜ್ಯ ಸರ್ಕಾರಗಳು ಅನುಸರಿಸಿದಂತೆ ಸಮತಳದ ಮೀಸಲಾತಿಯನ್ನು ಜಾರಿಗೊಳಿಸಲು ಮತ್ತು ಅಂಗವಿಕಲ ವ್ಯಕ್ತಿಗಳಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಿರುತ್ತದೆ.

ರಾಜ್ಯ ಸರ್ಕಾರದಲ್ಲಿ ನೇಮಕಾತಿ ಹಾಗೂ ಬಡ್ತಿ ಮೀಸಲಾತಿಗಾಗಿ ಹಾಲಿ ರಿಕ್ತ ಸ್ಥಾನ ಆಧಾರಿತ ವ್ಯವಸ್ಥೆಯನ್ನು ಪಾಲಿಸಲಾಗುತ್ತಿದೆ. ಕೇಂದ್ರ ಸರ್ಕಾರವು ಹುದ್ದೆ ಆಧಾರಿತ ವ್ಯವಸ್ಥೆಯನ್ನು ಪಾಲಿಸುತ್ತಿದೆ. ಭಾರತ ಸಂವಿಧಾನದ ಅನುಚ್ಛೇದ 16(4ಎ)ರನ್ವಯ ನೇರ ಮೀಸಲಾತಿಯಡಿ ಬರುವ (Vertical Reservation) ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಅಭ್ಯರ್ಥಿಗಳಿಗೆ ಮಾತ್ರ ಮುಂಬಡ್ತಿಯಲ್ಲಿ ಮೀಸಲಾತಿ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಸಮತಳ ಮೀಸಲಾತಿಯಡಿ ಬರುವ ಯಾವುದೇ ಪ್ರವರ್ಗಕ್ಕೆ ಬಡ್ತಿಯಲ್ಲಿ ಮೀಸಲಾತಿ ಕಲ್ಪಿಸಲು ಚಾಲ್ತಿಯಲ್ಲಿರುವ ರೂಪುರೇಷೆಗಳನ್ವಯ ಅವಕಾಶವಿರುವುದಿಲ್ಲ.

ನ್ಯಾಷನಲ್ ಫೆಡರೇಷನ್ ಆಫ್ ದಿ ಬ್ಲೈಂಡ್ ಸಂಸ್ಥೆಯು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ ಮನವಿಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಮತ್ತು ಇತರ ಕೆಲವು ರಾಜ್ಯ ಸರ್ಕಾರಗಳು ಅನುಸರಿಸಿದಂತೆ ಸಮತಳದ ಮೀಸಲಾತಿಯನ್ನು ಜಾರಿಗೊಳಿಸಲು ಅವಶ್ಯ ಬದಲಾವಣೆಗಳನ್ನು ಮಾಡುವ ಬಗ್ಗೆ ಹಾಗೂ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸುವ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ಸರ್ಕಾರದ ನಿವೃತ್ತ ಕಾರ್ಯದರ್ಶಿಯವರ ನೇತೃತ್ವದಲ್ಲಿ ಸಮಿತಿ ರಚಿಸಲು ತೀರ್ಮಾನಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

...ಯಾದಗಿರಿ

| | |
|---|---|
| ...ಕಾ.ನಿ.ಅ. | |
| ...ಲೆ.ಕಾ. | |
| ಸ.ಕಾ. | |
| ಅಧೀಕ್ಷಕರು-1 | |
| ಅಧೀಕ್ಷಕರು-2 | |

ಜಿಲ್ಲಾ ಪಂಚಾಯತ್ ... ಕಾರ್ಯಾಲಯ ಯಾದಗಿರಿ
ಆವಕ ಸಂಖ್ಯೆ : 5884
ದಿನಾಂಕ : 18/1/18
ಆವಕ ಗುಮಾಸ್ತ :

ಮು.ತಿ.ನೋ..2

Kiran Raghupathi
Scanned by CamScanner

**ಆದೇಶ ಸಂಖ್ಯೆ: ಸಿಆಸುಇ 6 ಸೆನೆನಿ 2017, ಬೆಂಗಳೂರು, ದಿನಾಂಕ: 05/01/2018**

ಹುದ್ದೆ ಆಧಾರಿತ ಮೀಸಲಾತಿ ನೀತಿ ಅನುಸರಿಸುವುದು ರಾಜ್ಯ ಸರ್ಕಾರದ ನೀತಿ-ನಿರ್ಣಯದಲ್ಲಿ ಒಂದು ಪ್ರಮುಖ ಬದಲಾವಣೆ ಆಗುವುದರಿಂದ ಇದರ ಸಾಧಕ-ಬಾಧಕಗಳನ್ನು ಪರಿಶೀಲಿಸಿ ವರದಿ ನೀಡಲು ಹಾಗೂ ಸಮತಳ ಮೀಸಲಾತಿಯಡಿ ಬರುವ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿ ಕಲ್ಪಿಸುವ ಸಾಧ್ಯತೆ ಬಗ್ಗೆ ಪರಿಶೀಲಿಸಲು ಶ್ರೀ.ಹೆಚ್.ಶಶಿಧರ್ ಭಾ.ಆ.ಸೇ.,(ನಿ) ಸರ್ಕಾರದ ಕಾರ್ಯದರ್ಶಿ ಇವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗಿದೆ.

ಷರತ್ತು ಮತ್ತು ನಿಬಂಧನೆಗಳನ್ನು ಪ್ರತ್ಯೇಕ ಆದೇಶದಲ್ಲಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

Gayathri M.R

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 05/01/2018ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಒದಗಿಸಲು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. •ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. •ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. •ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. •ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. •ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
14. •ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
15. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
16. ಎಲ್ಲಾ ಆರಕ್ಷಕ ಮಹಾ ನಿರೀಕ್ಷಕರು ಮತ್ತು ಉಪ ಆರಕ್ಷಕ ಮಹಾ ನಿರೀಕ್ಷಕರು
17. ಎಲ್ಲಾ ಇಲಾಖಾ ಮುಖ್ಯಸ್ಥರು
18. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ / ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು
19. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
21. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (• ಮುಖ ಪತ್ರದೊಂದಿಗೆ)

Kiran Raghupathi

Scanned by CamScanner